323 (32) ಶ್ರೀ ಬಸವರಾಜು ಹೆಚ್ ಡಿ (ವಿರಾಜಪೇಟೆ) . ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಣಸೂರು ಆನೇಚಾಕುರ್–ಗೋಣಿಕೊಪ್ಪ–ವಿರಾಜಪೇಟೆ ಮೂಲಕ ಕೇರಳ ರಾಜ್ಯಕ್ಕೆ ಸಂಪರ್ಕ ಕಲ್ಪಿಸುವ ಅಂತರ ರಾಜ್ಯ ಹೆದ್ದಾರಿಯನ್ನು ಸರ್ವಋತು ಹೆದ್ದಾರಿ ರಸ್ತೆಯನ್ನಾಗಿ ಅಭಿವೃದ್ಧಿ ಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ,

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ವಿವರ ನೀಡುವುದು)?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಹಾಗೂ ಇಂಧನ ಸಚಿವರು)

ಅ) ಇದೆ

ಆ) ಈ ರಸ್ತೆಯನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ಹೆದ್ದಾರಿ ಪರಿಣಿತರುಗಳಿಂದ ಪರಿವೀಕ್ಷಿಸಿದ್ದು, ಅವರ ತಾಂತ್ರಿಕ ವರದಿಯಂತೆ ರಸ್ತೆಯನ್ನು ಸಂಪೂರ್ಣವಾಗಿ ನಿರ್ಮಿಸುವ ಅವಶ್ಯಕತೆ ಇರುತ್ತದೆ ಇದರಂತೆ ಹುಣಸೂರು–ಆನೆಚೌಕೂರು–ಗೋಣಿಕೊಪ್ಪ–ವಿರಾಜಪೇಟೆ–ಮಾಕುಟ್ಟ ವರೆಗಿನ ರಸ್ತೆಯನ್ನು ಸರ್ವಋತು ರಸ್ತೆಯನ್ನಾಗಿಸಲು ರೂ 100 ಕೋಟಿಗಳ ಅಂದಾಜನ್ನು ತಯಾರಿಸಲಾಗಿದ್ದು ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿದೆ ಇದಲ್ಲದೆ ಈ ರಸ್ತೆಯ ಪೆರುಂಬಾಡಿಯಿಂದ ಕಿಮೀ 72 26 ರಿಂದ 76 26 ಕಿಮೀ ವರೆಗಿನ ಸರಪಳಿಯಲ್ಲಿ 3 5 ಕಿಮಿ ಉದ್ದ ರಸ್ತೆಗೆ ಮರುಡಾಂಬರೀಕರಣ ಕಾಮಗಾರಿಗೆ ಕೇಂದ್ರ ರಸ್ತೆ ನಿಧಿ ಯೋಜನೆಯಡಿಯಲ್ಲಿ ರೂ 70 00 ಲಕ್ಷಗಳಿಗೆ ಮಂಜೂರಾಗಿದ್ದು, ಸಧ್ಯದಲ್ಲಿಯೇ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಹಾಗೂ ಸದರಿ ರಸ್ತೆಯ ಕಿಮೀ 76 26 ರಿಂದ 92 76 ವರೆಗಿನ ಹಾಳಾಗಿರುವ ರಸ್ತೆಯನ್ನು ತಾತ್ಕಾಲಿಕವಾಗಿ ವಾಹನ ಸಂಚಾರಕ್ಕೆ ಯೋಗ್ಯವಾಗಿಸಲು ರೂ 100 ಲಕ್ಷಗಳಿಗೆ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವತಿಯಿಂದ ಕಾಮಗಾರಿಗಳನ್ನು ಸಧ್ಯದಲ್ಲಿಯೇ ಕೈಗೊಳ್ಳಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ

324 (33) ಶ್ರೀ ಬಸವರಾಜು ಹೆಚ್ ಡಿ (ವಿರಾಜಪೇಟೆ) ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿರಾಜಪೇಟೆ ತಾಲ್ಲೂಕಿನಲ್ಲಿರುವ ತಿತಿಮತಿ ಬಳಿಯ ರಾಜ್ಯ ಹೆದ್ದಾರಿ ಸೇತುವೆ ಕುಟ್ಟಪೂಚಕಲ್ಲೂ ವಾಹನ ಬಳಿಯಿರುವ ಮತ್ತು ಶ್ರೀಮಂಗಲ

ತಾಕೂರು ಬಳಿಯಿರುವ ಸೇತುವೆಗಳು ಸುಗಮ ವಾಹನ ಸಂಚಾರಕ್ಕೆ ಯೋಗ್ಯವಾಗಿ ಇಲ್ಲದೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಈ ಸೇತುವೆಗಳ ಪುನರ್ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮವೇನು,

ಇ) ಸದರಿ ಯೋಜನೆಗೆ ಮಂಜೂರು ಮಾಡಿದ ಹಣ ಎಷ್ಟು (ವಿವರ ಒದಗಿಸುವುದು)?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಹಾಗೂ ಇಂಧನ ಸಚಿವರು)

ಅ) ಬಂದಿದೆ

ಆ) ಈ ಸೇತುವೆಗಳನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದಿಂದ ಕೈಗೊಳ್ಳಲಾಗುವ 4ನೇ ಹಂತದ ಸೇತುವೆಗಳ ನಿರ್ಮಾಣದ ಯೋಜನೆ ಅಡಿಯಲ್ಲಿ ಸೇರಿಸಲು ಪರಿಶೀಲಿಸಲಾಗುತ್ತಿದ್ದು, ಸೇತುವೆಗಳ ನಿರ್ಮಾನ/ಪುನರ್ ನಿರ್ಮಾಣವನ್ನು ಅನುದಾನದ ಲಭ್ಯತೆಗನುಸಾರವಾಗಿ ಹಾಗೂ ಕಾಮಗಾರಿಯ ಆದ್ಯತೆ ಮೇರೆಗೆ ಹಂತ ಹಂತವಾಗಿ ಕೈಗೊಳ್ಳಲಾಗುವುದು

ಇ) ಸದರಿ ಪ್ರಸ್ತಾವನೆಗಳನು ಪರಿಶೀಲನೆಯ ಹಂತದಲ್ಲಿ ಇರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

325 (347) ಶ್ರೀಮತಿ ಭಾಗೀರಥಿ ಟಿ (ಕೊಟ್ಟೂರು) ಮಾನ್ಯ ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಟ್ಟೂರು ಬಸ್ ನಿಲ್ದಾಣ, ಬಸ್ ಶೆಲ್ಟರ್ಸ್, ಸಾರ್ವಜನಿಕರಿಗೆ ಕುಳಿತುಕೊಳ್ಳಲು ಸ್ಥಳವಿಲ್ಲದಿರುವುದು ಇನ್ನೂ ಅನೇಕ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ಈ ಎಲ್ಲಾ ಸುಧಾರಣೆಗಳಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು,

ಇ) ಈ ಸಮಸ್ಯೆಗಳನ್ನು ಪರಿಹರಿಸುವ ಕಾಮಗಾರಿಗಳಿಗಾಗಿ ಕಾಯ್ದಿರಿಸಿರುವ ಅನುದಾನ ಎಷ್ಟು?

ಶ್ರೀ ಎಸ್ ಚಲುವರಾಯಸ್ವಾಮಿ (ಸಾರಿಗೆ ಸಚಿವರು)

ಅ) ಬಂದಿದೆ

ಆ) ಪ್ರಯಾಣಿಕರಿಗೆ ಆಸನ ವ್ಯವಸ್ಥೆಯನ್ನು ಒದಗಿಸುವುದರ ಜೊತೆಗೆ ನೆಲಹಾಸನ್ನು ಉತ್ತಮಪಡಿಸಲು ಕಾಮಗಾರಿಗಳನ್ನು ತೆಗೆದುಕೊಳ್ಳುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ